SD

ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 15(37)
ಸದಸ್ಯರ ಹೆಸರು : ಶ್ರೀ ಎಸ್.ಎಲ್.ಭೋಜೇಗೌಡ (ಶಿಕ್ಷಕರ ಕ್ಷೇತ್ರ)
ಉತ್ತರಿಸುವ ದಿನಾಂಕ : 13-12-2021
ಉತ್ತರಿಸುವ ಸಚಿವರು : ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಹಾಗೂ ಸಕಾಲ ಸಚಿವರು.

ಕ್ರ.ಸ	ಪ್ರಶ್ನೆ	ಉತ್ತರ
ಅ	ಅನುದಾನ ಹಾಗೂ ಅನುದಾನರಹಿತ ಶಾಲಾ/ಕಾಲೇಜುಗಳ ಶಿಕ್ಷಕರಿಗೂ ಜ್ಯೋತಿ ಸಂಜೀವಿನಿ ಯೋಜನೆಯನ್ನು ವಿಸ್ತರಿಸುವ ಕುರಿತ ಸರ್ಕಾರಕ್ಕೆ ಬಂದಿರುವ ಮನವಿಗಳೆಷ್ಟು:	ಖಾಸಗಿ ಅನುದಾನಿತ ಹಾಗೂ ಅನುದಾನ ರಹಿತ ಶಾಲಾ/ಕಾಲೇಜುಗಳ ಶಿಕ್ಷಕರಿಗೂ 'ಜ್ಯೋತಿ ಸಂಜೀವಿನಿ" ಯೋಜನೆಯನ್ನು ವಿಸ್ತರಿಸುವ ಕುರಿತು ಮಾನ್ಯ ಸಚಿವರು, ಶಾಸಕರು, ಮತ್ತು ಕರ್ನಾಟಕ ವಿಧಾನ ಸಭೆ/ಪರಿಷತ್ತಿನ ಮಾನ್ಯ ಸದಸ್ಯರುಗಳು ಹಾಗೂ ಶಿಕ್ಷಕರ ಸಂಘಗಳಿಂದ ಹಲವಾರು ಮನವಿಗಳನ್ನು ಸ್ವೀಕರಿಸಲಾಗಿದೆ.
ಆ	ಈ ಕುರಿತು ಸರ್ಕಾರ ಕೈಗೊಂಡ ಕ್ರಮಗಳೇನು:	ಸರ್ಕಾರಿ ನೌಕರರು ಚಿಕಿತ್ಸೆ ಪಡೆದ ನಂತರ ಸದರಿ ಮೊತ್ತವನ್ನು ನಿಯಮಾನುಸಾರ ಪರಿಶೀಲಿಸಿ ಹಿಂಬರಿಸಲಾಗುತ್ತಿತ್ತು. ಪ್ರಸ್ತುತ ಜ್ಯೋತಿ ಸಂಜೀವಿನಿ ಯೋಜನೆಯಡಿ ನಗದು ರಹಿತ ಚಿಕಿತ್ಸೆಯನ್ನು ನೀಡಲಾಗುತ್ತಿದೆ. ಅದರೆ ಅನುದಾನಿತ ಶಾಲಾ ಕಾಲೇಜುಗಳ ಶಿಕ್ಷಕರು ಕರ್ನಾಟಕ ಶಿಕ್ಷಣ ಅಧಿನಿಯಮ-1983 ಮತ್ತು ಅದರಡಿ ರಚಿಸಲ್ಪಟ್ಟ ಕರ್ನಾಟಕ ಶಿಕ್ಷಣ ಸಂಸ್ಥೆಗಳ (classification, regulation and prescription of curricula) ನಿಯಮಗಳು, 1995ರ ವ್ಯಾಪ್ತಿಗೆ ಒಳಪಡುತ್ತಾರೆ. ಇವರನ್ನು ಸರ್ಕಾರಿ ನೌಕರರೆಂದು ಪರಿಗಣಿಸಲಾಗುವುದಿಲ್ಲ. ಮುಂದುವರೆದು ಖಾಸಗಿ ಅನುದಾನಿತ ಶಿಕ್ಷಣ ಸಂಸ್ಥೆಗಳ ಶಿಕ್ಷಕರು ಕರ್ನಾಟಕ ಸರ್ಕಾರಿ ನೌಕರರ(ವೈದ್ಯಕೀಯ ಹಾಜರಾತಿ) ನಿಯಮಗಳು-1963 ವ್ಯಾಪ್ತಿಗೆ ಒಳಪಡುವುದಿಲ್ಲ ಹಾಗೂ ಕರ್ನಾಟಕ ಶಿಕ್ಷಣ ಸಂಸ್ಥೆಗಳು (ಖಾಸಗಿ ಅನುದಾನಿತ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಂಸ್ಥೆಗಳ ನೌಕರರ ನೇಮಕಾತಿ ಹಾಗೂ ಸೇವಾ ಷರತ್ತು ಹಾಗೂ ನಿಬಂಧನೆಗಳು)ನಿಯಮಗಳು-1999ರ ನಿಯಮ-ii (3)ರನ್ವಯ ವೈದ್ಯಕೀಯ ವೆಚ್ಚ ಮರುಪಾವತಿ ಸೌಲಭ್ಯಕ್ಕೂ ಅರ್ಹರಾಗಿರುವುದಿಲ್ಲ. ಆದುದರಿಂದ ಖಾಸಗಿ ಅನುದಾನಿತ ಹಾಗೂ ಅನುದಾನ ರಹಿತ ಶಿಕ್ಷಕರು ಜ್ಯೋತಿ ಸಂಜೀವಿನಿ ಯೋಜನೆಯ ವ್ಯಾಪ್ತಿಗೆ ಒಳಪಡುವುದಿಲ್ಲ.
ಇ	ಶಿಕ್ಷಕರಿಗೂ ಜ್ಯೋತಿ ಸಂಜೀವಿನಿ ಯೋಜನೆಯನ್ನು ವಿಸ್ತರಿಸಲು ಇರುವ ಅಡೆತಡೆಗಳೇನು: ಈ ಅಡೆತಡೆಗಳನ್ನು ಸರಿಪಡಿಸಿ, ಈ ವ್ಯಾಪ್ತಿಗೆ ಶಿಕ್ಷಕನ್ನು ಒಳಪಡಿಸಲು ಸರ್ಕಾರ ಕೈಗೊಂಡ ಕ್ರಮಗಳೇನು:	
ಈ	ಯಾವ ಕಾಲಮಿತಿಯೊಳಗೆ ಈ ಸೌಲಭ್ಯವನ್ನು ಒದಗಿಸಲಾಗುವುದು?	ಉದ್ಭವಿಸುವುದಿಲ್ಲ

ಇಪಿ 452 ಎಸ್‌ಇಎಸ್ 2021

(ಬಿ.ಸಿ.ನಾಗೇಶ್)
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ
ಹಾಗೂ ಸಕಾಲ ಸಚಿವರು